685

Ph. No.:080- 2296 1039

# BANGALORE UNIVERSITY

No.Aca-III/A3/IFIM/2009-10

JNANA BHARATHI
Bangalore - 560 056

To,

*The Principal,*
IFIM College,
#8P & 9P, KIADB Industrial Area,
Electronic City,
BANGALORE-560 100.

Date : *3-2-2010*

***Sir/Madam,***

**Sub:** Affiliation certificate of the courses in English.

**Ref:** 1. University affiliation order No.ಎಶಿಎ-3/ಎ1/IFIM/2009-2010 Dated:25-8-2009.
2. Your letter dated:19-1-2010.

* * *

With reference to the above, as per the University affiliation notification dated:25-8-2009, IFIM College, #8P & 9P, KIADB Industrial Area, Electronic City, Bangalore-560 100 which is an affiliated college of Bangalore University is permitted to offer following courses for the year 2009-10.

| *Courses* | *Combinations* | *Intake* |
|---|---|---|
| B.Com. | As per Bangalore University regulations | 60 (Sixty) |
| B.B.M | As per Bangalore University regulations | 60 (Sixty) |
| B.C.A | As per Bangalore University regulations | 40 (Forty) |

This letter is issued as per your request.

Yours faithfully

**DY.REGISTRAR**

*Draft approved by the Registrar*

8/2/010

# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ1/IFIM/ಹೊ.ಕಾ/2009-2010

ಜ್ಞಾನಭಾರತಿ
ಬೆಂಗಳೂರು-56
ದಿನಾಂಕ:25-8-2009

## ಅಧಿಸೂಚನೆ

**ವಿಷಯ : 2009-10ನೇ ಶೈಕ್ಷಣಿಕ ಸಾಲಿಗೆ, ಬೆಂಗಳೂರಿನ ಐ.ಎಫ್.ಐ.ಎಂ ಕಾಲೇಜಿಗೆ** ಹೊಸ ಸಂಯೋಜನೆ ನೀಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರದ ಸಂಖ್ಯೆ:ಇಡಿ:406:ಯು.ಬಿ.ವಿ.:2009 ದಿ:25-8-2009.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ **2000**ದ **59**ನೇ ಪ್ರಕರಣದ **11**ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರಿನ **ಸೆಂಟರ್ ಫಾರ್ ಡೆವೆಲಪ್‌ಮೆಂಟಲ್ ಎಜುಕೇಷನ್**, ಇವರು **2009-2010**ನೇ ಸಾಲಿನಿಂದ **ನಂ.8ಪಿ-9ಪಿ, ಕೆಐಎಡಿಬಿ ಇಂಡಸ್ಟ್ರಿಯಲ್ ಏರಿಯಾ, ಎಲಿಕ್ಟ್ರಾನಿಕ್ ಸಿಟಿ 1ನೇ ಫೇಸ್, ಬೆಂಗಳೂರು -560 100** ಇಲ್ಲಿ ಸ್ಥಾಪಿಸಲು ಉದ್ದೇಶಿಸಿರುವ **ಐ.ಎಫ್.ಐ.ಎಂ ಕಾಲೇಜಿಗೆ** ಕೆಳಕಂಡ ಕೋರ್ಸುಗಳೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |
| ಬಿ.ಬಿ.ಎಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |
| ಬಿ.ಸಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 40 (ನಲವತ್ತು) |

**ಷರತ್ತುಗಳು:**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕಾಲೇಜಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರುಮಾಡುವುದಿಲ್ಲ; ಅದು ಶಾಶ್ವತ ಅನುದಾನ ರಹಿತ ಕಾಲೇಜೆಂದು ಪರಿಗಣಿಸತಕ್ಕದ್ದು.
2. ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಡಲು ಕಾಲೇಜು ಸರ್ಕಾರಕ್ಕೆ ಬರೆದುಕೊಟ್ಟಿರುವ ಮಧ್ಯಂತರ ಒಪ್ಪಂದದಲ್ಲಿನ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
4. ಸದರಿ ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
5. ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
6. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಇವುಗಳನ್ನು ಪಾಲಿಸಿದ ಬಗ್ಗೆ ವರದಿಯನ್ನು ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಕಳುಹಿಸತಕ್ಕದ್ದು.
7. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತ್ತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.
8. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

. . . . 2 . . .

9. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಘಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

10. ವೈಶಾಕ **V/S** ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟುಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕಳ, ಲೈಂಗಿಕ ಕಿರುಕಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

11. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

12. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

13. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

14. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

***15. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.***

16. 2010-2011ನೇ ಶೈಕ್ಷಣಿಕ ಸಾಲಿಗೆ ಕೋರ್ಸು/ಗಳ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ವಿಶ್ವವಿದ್ಯಾಲಯಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.

17. ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಮುಚ್ಚಳಿಕೆ ಪತ್ರದ ಮಾದರಿಯನ್ನು ರೂ.20/-ಗಳ ಛಾಪಾಕಾಗದದಲ್ಲಿ ಬೆರಳಚ್ಚು ಮಾಡಿ, ಕಾಲೇಜಿನ ಅಧ್ಯಕ್ಷರು/ಪ್ರಾಂಶುಪಾಲರಿಂದ ಸಹಿ ಮಾಡಿಸಿ, ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಸಲ್ಲಿಸತಕ್ಕದ್ದು.

ಆಜ್ಞೆ ಮೇರೆಗೆ

**ಕುಲಸಚಿವರು**

ಗೆ,

**1. ಅಧ್ಯಕ್ಷರು/ಕಾರ್ಯದರ್ಶಿ,**
**ಸೆಂಟರ್ ಫಾರ್ ಡೆವೆಲಪ್‌ಮೆಂಟಲ್**
**ಎಜುಕೇಷನ್, ನಂ.8ಪಿ-9ಪಿ, ಕೆಐಎಡಿಬಿ**
**ಇಂಡಸ್ಟ್ರಿಯಲ್ ಏರಿಯಾ, ಎಲೆಕ್ಟ್ರಾನಿಕ್ ಸಿಟಿ 1ನೇ**
**ಫೇಸ್, ಬೆಂಗಳೂರು -560 100.**

**2. ಪ್ರಾಂಶುಪಾಲರು,**
**ಐಎಫ್‌ಐಎಂ ಕಾಲೇಜು,**
**ನಂ.8ಪಿ-9ಪಿ, ಕೆಐಎಡಿಬಿ ಇಂಡಸ್ಟ್ರಿಯಲ್**
**ಏರಿಯಾ, ಎಲೆಕ್ಟ್ರಾನಿಕ್ ಸಿಟಿ 1ನೇ ಫೇಸ್,**
**ಬೆಂಗಳೂರು -560 100.**

ಪ್ರತಿಗಳು:

1. ಪ್ರಧಾನ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ (ವಿಶ್ವ ವಿದ್ಯಾಲಯ) , ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-1
2. ನಿರ್ದೇಶಕರು, ಶಿಕ್ಷಣ ಆಯುಕ್ತರು, ಬೆಂಗಳೂರು-1. 3. ಕುಲಸಚಿವರು (ಮೌಲ್ಯಮಾಪನ), ಬೆಂ. ವಿ., ಬೆಂಗಳೂರು-1,
4. ಉಪ.ಕುಲಸಚಿವರು : ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4. ಬೆಂ. ವಿ. ಬೆಂಗಳೂರು-56.